# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 223(1574)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನ ಸಭೆಯಿಂದ ಚುನಾಯಿತರಾದವರು )

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮುಖ್ಯಮಂತ್ರಿಗಳು

ವಿಷಯ : ಕೊಡಗು ಜಿಲ್ಲೆಯ ಭಾಗಮಂಡಲದಲ್ಲಿ ನಿರ್ಮಾಣವಾಗುತ್ತಿರುವ ಮೇಲುಸೇತುವೆ ಕಾಮಗಾರಿ ಕುರಿತು

(ಅ) ಕೊಡಗು ಜಿಲ್ಲೆಯ ಭಾಗಮಂಡಲದಲ್ಲಿ ಕಾವೇರಿ ನೀರಾವರಿ ನಿಗಮದ ವತಿಯಿಂದ ನಿರ್ಮಾಣಗೊಳ್ಳುತ್ತಿರುವ ಮೇಲುಸೇತುವೆ ನಿರ್ಮಾಣ ಕಾರ್ಯ ಆರಂಭಗೊಂಡು ಎರಡು ವರ್ಷ ಕಳೆದಿದ್ದರೂ, ಕಾಮಗಾರಿ ಇದುವರೆವಿಗೂ ಪೂರ್ಣಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ ಕಾಮಗಾರಿಯ ಅಂದಾಜು ಮೊತ್ತ, ಇಲ್ಲಿಯವರೆಗೆ ವಿನಿಯೋಗಿಸಿರುವ ಅನುದಾನದ ವಿವರಗಳೇನು; ಹಾಗೂ ಕಾಮಗಾರಿಯನ್ನು ಪೂರ್ಣ ಮಾಡಲು ಬೇಕಾದ ಉಳಿಕೆ ಹಣ ಪ್ರಸ್ತುತ ಲಭ್ಯ ಇದೆಯೇ;

(ಇ) ಮಳೆಗಾಲದಲ್ಲಿದ್ವೀಪದಂತಾಗುವ ಭಾಗಮಂಡಲದಲ್ಲಿ ಸಾರ್ವಜನಿಕರಿಗೆ ಹಾಗೂ ಭಕ್ತಾಧಿಗಳಿಗೆಆಗುತ್ತಿರುವ ತೊಂದರೆಯನ್ನು ನಿವಾರಿಸುವ ಸಲುವಾಗಿ ಯಾವ ಕಾಲಮಿತಿಯೊಳಗೆ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು?